**CENTRAL UNIVERSITY OF KARNATAKA**
*(Established by an Act of the Parliament in 2009)*

Kadaganchi, Aland Road,
Gulbarga-585311, Karnataka
Phone 08477-226729
Telefax: 08477-225703
Website: www.cuk.ac.in
Email: cukdsw@cuk.ac.in

No. CUK/SW-II/F-5054/2015-16/ 60

13th August, 2015

# CIRCULAR

It is hereby informed that the students belonging to OBC (Cat-I, IIA, IIIA, IIIB) category of Central University of Karnataka, need to apply for Food & Accommodation/Post Matric/Fee Concession Scheme for scholarships initiated by the Department of Backward Class Welfare, Govt. of Karnataka for the Academic Year 2015-16 through online mode: **(website: karepass.egg.gov.in or www.backwardclasses.kar.nic.in)** and printed hard copy of online application with relevant attested documents should submitted through concerned School/Department to Dean, Students' Welfare office on or before 28.08.2015.

***Note: The OBC Eligible Students if does not apply for the OBC Scholarship within the stipulated date, then the full fees to be paid by the concerned students to the University within 15 days from the stipulated last date of such applicant.***

13.8.15

**Dean, Student Welfare**
Dean of Student Welfare
Central University of Karnataka
GULBARGA

**Enclosure:** Circular copy of Backward Class Welfare Department

**Copy to:**

1. All the Deans of the Schools
2. All the Heads of the Depts.
3. Office of the Registrar
4. Liaison Officer, OBC Cell.
5. Asst. Registrar (Acad)
6. System Analysis (for uploading in CUK website)
7. PS to Vice-Chancellor
8. All Notice Boards
9. Concerned file

ಕರ್ನಾಟಕ ಸರ್ಕಾರ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-52

ಸಂಖ್ಯೆ/ಹಿಂವಕಇ/ಡಿಬಿಟಿ-3/ಸಿಆರ್-36/2015-16 ದಿನಾಂಕ: 05.08.2015

**<u>ಪ್ರಕಟಣೆ</u>**

*ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 2015-16ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-"ಊಟ ಮತ್ತು ವಸತಿ ಸಹಾಯ ಯೋಜನೆ" ಮತ್ತು ಪೂರ್ಣಾವಧಿ ಪಿ.ಹೆಚ್.ಡಿ. ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.*

ಅರ್ಜಿಯನ್ನು ಆನ್‌ಲೈನ್ ಮೂಲಕ **<u>karepass.cgg.gov.in</u>** ಹಾಗೂ <u>www.backwardclasses.kar.nic.in</u> ನಲ್ಲಿ ಸಲ್ಲಿಸಬಹುದು.

***ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 05.09.2015***

<u>ಕಾರ್ಯಕ್ರಮಗಳ ವಿವರ, ಸೌಲಭ್ಯ ಪಡೆಯಲು ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ಕಾರ್ಯಕ್ರಮಗಳ ಸರ್ಕಾರಿ ಆದೇಶಗಳಿಗಾಗಿ ಇಲಾಖೆಯ ವೆಬ್‌ಸೈಟ್</u>
**<u>www.backwardclasses.kar.nic.in</u>** ನೋಡಬಹುದು.

<u>ಸಂಪರ್ಕಿಸಬೇಕಾದ ಮೊಬೈಲ್ ಸಂ. 9480818013</u>

<u>ಸಹಾಯವಾಣಿ ಸಂ.080-44554444</u>

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

**"ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-"ಊಟ ಮತ್ತು ವಸತಿ ಸಹಾಯ ಯೋಜನೆ" ಮತ್ತು ಪೂರ್ಣಾವಧಿ ಪಿ.ಹೆಚ್.ಡಿ. ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು:**

1. ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಒಳಪಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ.
2. ಈ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.
3. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.
4. ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
5. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ ಸ್ಥಳೀಯ ಸಂಸ್ಥೆ / ಅನುದಾನಿತ ಸಂಸ್ಥೆಗಳು / ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಸಂಸ್ಥೆಗಳಲ್ಲಿ – ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.
6. "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-"ಊಟ ಮತ್ತು ವಸತಿ ಸಹಾಯ ಯೋಜನೆ" ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ / ಪೋಷಕರ ಕುಟುಂಬದ ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.
   - (i) ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ
   - (ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ
7. ಪೂರ್ಣಾವಧಿ ಪಿ.ಹೆಚ್.ಡಿ. ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಆದಾಯ ಮಿತಿ
   - (i) ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.4.50 ಲಕ್ಷ
   - (ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ3.50 ಲಕ್ಷ
8. (i) ವಿದ್ಯಾರ್ಥಿನಿಲಯದಲ್ಲಿ ಪ್ರವೇಶ, (ii) ಊಟ ಮತ್ತು ವಸತಿ ಸಹಾಯ ಯೋಜನೆ (iii) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮತ್ತು (iv) ಪೂರ್ಣಾವಧಿ ಪಿ.ಹೆಚ್.ಡಿ. ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ / ಫೆಲೋಶಿಪ್ ಇವುಗಳಲ್ಲಿ ಒಬ್ಬ ವಿದ್ಯಾರ್ಥಿ, ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರು. ಆದರೆ ಶುಲ್ಕ ವಿನಾಯಿತಿ ಸೌಲಭ್ಯವನ್ನು ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನೀಡಲಾಗುವುದು.

   (ಆ) ಯಾವುದೇ ಇಲಾಖೆಯ ಸರ್ಕಾರಿ / ಸರ್ಕಾರಿ ಅನುದಾನಿತ ವಿದ್ಯಾರ್ಥಿನಿಲಯ / ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ, ಈ ಸೌಲಭ್ಯವನ್ನು ಒದಗಿಸಲಾಗುವುದು.
9. (ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

   (ಆ) ಸ್ನಾತಕೋತ್ತರ, ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

(ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೊಮಾ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

(ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

10. ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಗೆ ಸಂಬಂಧಿಸಿದಂತೆ ಕೆಳಗಿನ ಅಂಶಗಳನ್ನು ಗಮನಿಸತಕ್ಕದ್ದು.

    1) ಸರ್ಕಾರದ ಆದೇಶ ಸಂ.ಬಿಸಿಡಬ್ಲ್ಯೂ 516 ಬಿಎಂಎಸ್ 2013, ದಿನಾಂಕ 24.9.2013 ಹಾಗೂ 18.11.2014 ರಂತೆ –

    ಮೊದಲನೇ ಆದ್ಯತೆಯಲ್ಲಿ – ನವೀಕರಣ ವಿದ್ಯಾರ್ಥಿಗಳಿಗೆ

    ಎರಡನೇ ಆದ್ಯತೆಯಲ್ಲಿ – ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ್ದು, ಪ್ರವೇಶ ದೊರಕದ ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಿದ ನಂತರ ಅನುದಾನ ಲಭ್ಯವಾದಲ್ಲಿ ಮಾತ್ರ ಹೊಸದಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ನಿಯಮಾನುಸಾರ ಮಂಜೂರಾತಿ ನೀಡಲಾಗುವುದು.

11. ನವೀಕರಣ ವಿದ್ಯಾರ್ಥಿಗಳು (2014–15ನೇ ಸಾಲಿನಲ್ಲಿ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ/ ಶುಲ್ಕ ವಿನಾಯಿತಿ / ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಯೋಜನೆಗಳಲ್ಲಿ ಮಂಜೂರಾದ ವಿದ್ಯಾರ್ಥಿಗಳು ಮಾತ್ರ) ಹಾಗೂ **ಹೊಸದಾಗಿ ಅರ್ಜಿ ಸಲ್ಲಿಸುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು** ಈ ಮೇಲಿನ ಮೂರು ಯೋಜನೆಗಳಿಗೆ **ಒಂದೇ ಅರ್ಜಿಯನ್ನು** ಸಲ್ಲಿಸಬೇಕು.

12. ಈ ಕೆಳಗಿನ ಮೂಲ ದಾಖಲೆಗಳನ್ನು ಪ್ರತ್ಯೇಕವಾಗಿ ಸ್ಕ್ಯಾನ್ ಮಾಡಿ, ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡಬೇಕು.

    [ಪ್ರತಿ ದಾಖಲೆಯು **100 Kb JPG Format** ಇರಬೇಕು]

    1) ಜಾತಿ ಮತ್ತು ಆದಾಯ ಪ್ರಮಾಣ ಪತ್ರ.

    2) ಹಿಂದಿನ ವರ್ಷದಲ್ಲಿ ಉತ್ತೀರ್ಣರಾದ ಮೂಲ ಅಂಕಪಟ್ಟಿ.

    3) ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದಿರಬೇಕು. (ಹೆಸರು, ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ಇರುವ ರೀತಿಯಲ್ಲಿ ಇರಬೇಕು.) ಪಾಸ್‌ಬುಕ್ ಹೊಂದಿರಬೇಕು. ಬ್ಯಾಂಕ್ ಅಕೌಂಟ್ ನಂಬರ್ ಮತ್ತು **IFSC** ಕೋಡ್ ಇರುವ ಮೊದಲ ಪುಟದ ಭಾಗದ ಪ್ರತಿ ಸಲ್ಲಿಸಬೇಕು. ವಿದ್ಯಾರ್ಥಿಯು ಉಳಿತಾಯ ಖಾತೆ ಸಂಖ್ಯೆ ಹಾಗೂ **IFSC** ಕೋಡ್ ತಪ್ಪಿಲ್ಲದಂತೆ ನಮೂದಿಸಬೇಕು. ವಿದ್ಯಾರ್ಥಿಯು ತಪ್ಪಾಗಿ ನಮೂದು ಮಾಡಿದಲ್ಲಿ ಪರಿಷ್ಕರಣೆಗೆ ಅವಕಾಶ ಇರುವುದಿಲ್ಲ.

    4) ಆಧಾರ್ UID ಹೊಂದಿದ್ದಲ್ಲಿ ಅದರ ಪ್ರತಿ.

    5) ಪಡಿತರ ಚೀಟಿ ಇದ್ದಲ್ಲಿ ಅದರ ಪ್ರತಿ.

    6) ಅಂಧ ವಿದ್ಯಾರ್ಥಿಗಳಾಗಿದ್ದಲ್ಲಿ "ಅಂಧತ್ವ ಪ್ರಮಾಣ ಪತ್ರ" ವನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ಇಂತಹ ವಿದ್ಯಾರ್ಥಿಗಳಿಗೆ ಶುಲ್ಕಗಳ ಜೊತೆಗೆ ಹೆಚ್ಚುವರಿಯಾಗಿ "ರೀಡರ್ ಚಾರ್ಜ್" ಅನ್ನು ಸಹ ಮಂಜೂರು ಮಾಡಲಾಗುವುದು.

7) ಪಿ.ಹೆಚ್.ಡಿ ವಿದ್ಯಾರ್ಥಿಗಳು ಆನ್‌ಲೈಲ್ ಮೂಲಕ ಅರ್ಜಿ ಸಲ್ಲಿಸುವಾಗ ಮೇಲ್ಕಾಣಿಸಿದ ದಾಖಲೆಗಳೊಂದಿಗೆ ಈ ಕೆಳಗಿನ ದಾಖಲೆಗಳನ್ನು ಅಪ್‌ಲೋಡ್ ಮಾಡುವುದು.

- ಸ್ನಾತ್ತಕೋತ್ತರ ಪದವಿಯ ಅಂಕಪಟ್ಟಿಗಳು.
- ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
- ಪಿ.ಹೆಚ್.ಡಿ. ಅಧ್ಯಯನಕ್ಕಾಗಿ ನೋಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ.
- ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ದೃಢೀಕರಣ.
- ಆನ್‌ಲೈನ್‌ನಲ್ಲಿ ಸಲ್ಲಿಸಿದ ಹಾಗೂ ಮುದ್ರಿಸಿಕೊಂಡ ಅರ್ಜಿ ನಮೂನೆ ಹಾಗೂ ಕ್ರ.ಸಂ.(12)ರಲ್ಲಿ 1 ರಿಂದ 7ರವರೆಗೆ ಅಪ್‌ಲೋಡ್ ಮಾಡಿದ ಎಲ್ಲಾ ದಾಖಲೆಗಳ ನಕಲು ಪ್ರತಿಗಳೊಂದಿಗೆ ಸೇರಿಸಿ ಸಂಬಂಧಪಟ್ಟ ಕಾಲೇಜು ಪ್ರಾಂಶುಪಾಲರಿಗೆ ಸಲ್ಲಿಸುವುದು.

13. ಹೆಚ್ಚಿನ ವಿವರಗಳು ಹಾಗೂ ಈ ಕಾರ್ಯಕ್ರಮಗಳ ಸರ್ಕಾರದ ಆದೇಶಗಳಿಗಾಗಿ ವಿದ್ಯಾರ್ಥಿಗಳು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು / ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳನ್ನು ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಸೈಟ್ www.backwardclasses.kar.nic.in ಹಾಗೂ karepass.cgg.gov.in ಸಂಪರ್ಕಿಸಬಹುದು.

ದಿನಾಂಕ: 05.08.2015

ಆಯುಕ್ತರ ಪರವಾಗಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.